# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43–ಎ ರಡಿ ಗ್ರಾಮ ಪಂಚಾಯಿತಿ ಸದಸ್ಯರುಗಳು, ಪ್ರಕರಣ 48(4) ಮತ್ತು 48(5) ರಡಿ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರುಗಳ ಮೇಲೆ ದುರ್ವತನೆ, ಅಧಿಕಾರ ಮತ್ತು ಹಣ ದುರುಪಯೋಗಕ್ಕಾಗಿ ಕ್ರಮಕೈಗೊಳ್ಳುವ ಸಲುವಾಗಿ ಅರೆನ್ಯಾಯಿಕ ಮಾದರಿಯಲ್ಲಿ ವಿಚಾರಣೆ ನಡೆಸುವ ಅಧಿಕಾರವನ್ನು ಪ್ರಾದೇಶಿಕ ಆಯುಕ್ತರುಗಳಿಗೆ ವಹಿಸುವ ಬಗ್ಗೆ.

ಪ್ರಸ್ತಾವನೆ.–

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 43–ಎ ಉಪಬಂಧದಲ್ಲಿ ಗ್ರಾಮ ಪಂಚಾಯತಿ ಸದಸ್ಯರುಗಳನ್ನು ಮತ್ತು ಪ್ರಕರಣ 48(4) ಮತ್ತು 48(5)ರ ಉಪಬಂಧಗಳಲ್ಲಿ ಅಧ್ಯಕ್ಷರು ಮತ್ತು ಉಪಾಧ್ಯಕ್ಷರುಗಳು ಎಸಗುವ ಕರ್ತವ್ಯಲೋಪ, ದುರ್ವತನೆ, ಅಧಿಕಾರ ಹಾಗೂ ಹಣ ದುರುಪಯೋಗಪಡಿಸಿಕೊಂಡ ಆರೋಪಗಳಿಗೆ ಸಂಬಂಧಿಸಿದಂತೆ ಸರ್ಕಾರವು ತಾನು ಭಾವಿಸಬಹುದಾದ ವಿಚಾರಣೆಯನ್ನು ನಡೆಸಿ ಕ್ರಮಕೈಗೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಸರ್ಕಾರವು ಈ ಸಂಬಂಧ ದಾಖಲಾಗುವ ಪ್ರಕರಣಗಳಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ (ಪಂ.ರಾಜ್) ರವರು ವಿಚಾರಣೆ ನಡೆಸಿ ಯುಕ್ತ ತೀರ್ಮಾನ ಕೈಗೊಂಡ ನಂತರ ಆದೇಶ ಹೊರಡಿಸಲಾಗುತ್ತಿದೆ. ರಾಜ್ಯದಲ್ಲಿ 6021 ಗ್ರಾಮ ಪಂಚಾಯಿತಿಗಳಿದ್ದು, ರಾಜ್ಯ ಹಾಗೂ ಕೇಂದ್ರ ಸರ್ಕಾರಗಳ ಶಾಸನಬದ್ಧ ಅನುದಾನಗಳಲ್ಲದೆ ವಿವಿಧ ಯೋಜನೆಗಳು/ಕಾರ್ಯಕ್ರಮಗಳಡಿ ಹೆಚ್ಚಿನ ಪ್ರಮಾಣದ ಅನುದಾನ ಗ್ರಾಮ ಪಂಚಾಯಿತಿಗಳಿಗೆ ಬಿಡುಗಡೆಯಾಗುತ್ತಿದೆ. ಗ್ರಾಮ ಪಂಚಾಯಿತಿಗಳ ಅಧ್ಯಕ್ಷರುಗಳಿಗೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಜೊತೆಗೂಡಿ ಹಣ ಸೆಳೆಯುವ ಅಧಿಕಾರವನ್ನು ಪ್ರತ್ಯಾಯೋಜಿಸಲಾಗಿದೆ. ಈ ಹಿನ್ನೆಲೆಯಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷರುಗಳ ಮೇಲೆ ಹೆಚ್ಚಿನ ಪ್ರಮಾಣದ ಹಣ ದುರುಪಯೋಗ ಪ್ರಕರಣಗಳು ದಾಖಲಾಗುತ್ತಿವೆ. ಹಾಗೆಯೇ ಗ್ರಾಮ ಪಂಚಾಯಿತಿ ಸದಸ್ಯರುಗಳು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಯಾವುದೇ ಲಾಭದಾಯಕ ವ್ಯವಹಾರಗಳಲ್ಲಿ ಭಾಗಿಯಾಗಬಾರದೆಂಬುದು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ, 1993 ರ ಆಶಯವಾಗಿದೆ. ಆದಾಗ್ಯೂ ಗ್ರಾಮ ಪಂಚಾಯಿತಿಯ ಸದಸ್ಯರುಗಳು ತಮ್ಮ ಅಧಿಕಾರ ಸ್ಥಾನ ದುರ್ಬಳಕೆ ಮಾಡಿಕೊಂಡು ಗ್ರಾಮ ಪಂಚಾಯಿತಿಗಳಲ್ಲಿ ಲಾಭದಾಯಕ ವ್ಯವಹಾರಗಳಲ್ಲಿ ತೊಡಗುವ ಬಗ್ಗೆ ಹಲವಾರು ದೂರುಗಳು ಸರ್ಕಾರಕ್ಕೆ ದಾಖಲಾಗುತ್ತಿವೆ.

ಗ್ರಾಮ ಪಂಚಾಯಿತಿ ಅಧ್ಯಕ್ಷರುಗಳು, ಉಪಾಧ್ಯಕ್ಷರುಗಳು ಹಾಗೂ ಸದಸ್ಯರುಗಳ ಮೇಲೆ ದಾಖಲಾಗುವ ದೂರುಗಳನ್ನು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಕಳುಹಿಸಿ ಅವರಿಂದ ಪರಿಶೀಲಿಸಿ ಈ ದೂರುಗಳಲ್ಲಿ ಸತ್ಯಾಂಶವಿದ್ದು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ, 1993 ರ ಪ್ರಕರಣ 43–ಎ, ಪ್ರಕರಣ 48(4) ಮತ್ತು 48(5) ರಡಿ ಕ್ರಮ ಕೈಗೊಳ್ಳಲು ಯೋಗ್ಯ ಪ್ರಕರಣ ಎಂಬ ಬಗ್ಗೆ ಶಿಫಾರಸ್ಸು ಮಾಡಲು ತಿಳಿಸಲಾಗುತ್ತಿದೆ. ಹೀಗೆ ಶಿಫಾರಸ್ಸು ಬಂದ ನಂತರ ಸಂಬಂಧಿಸಿದ ಪ್ರಕರಣದಲ್ಲಿ ಭಾಗಿಗಳಾಗಿರುವ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳಿಗೆ ದೋಷಾರೋಪಣೆ ಹೊರಿಸಿ ಕಾರಣ ಕೇಳಿ ನೋಟೀಸ್ ಜಾರಿ ಮಾಡಲಾಗುತ್ತಿದೆ. ನೋಟೀಸ್‌ಗಳಿಗೆ ವಿವರಣೆ ಸ್ವೀಕೃತವಾದ ನಂತರ ದಿನಾಂಕ ನಿಗದಿಪಡಿಸಿ ಅರೆನ್ಯಾಯಿಕ ಮಾದರಿಯಲ್ಲಿ ವಿಚಾರಣೆ ನಡೆಸಲಾಗುತ್ತಿದೆ. ಈ ವಿಚಾರಣೆಗಳು ಒಮ್ಮೊಮ್ಮೆ ಪ್ರಕರಣದ ಗಂಭೀರತೆಗನುಗುಣವಾಗಿ 2–3 ಸಲ ನಡೆಸಲಾಗುತ್ತಿದೆ. ಕೆಲವೊಮ್ಮೆ ಸ್ಥಳೀಯ ಅಧಿಕಾರಿಗಳಿಂದ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಹಿತಿ/ದಾಖಲೆಗಳನ್ನು ಪಡೆಯಲಾಗುತ್ತಿದೆ. ವಿಚಾರಣೆಯಲ್ಲಿ ಕಂಡುಬಂದ ಅಂಶಗಳನ್ನು ಆಧರಿಸಿ ಸಂಬಂಧಿಸಿದ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳ ಮೇಲೆ ಸೂಕ್ತ ಕ್ರಮಕ್ಕೆ ಆದೇಶ ಹೊರಡಿಸಲಾಗುತ್ತಿದೆ.

ರಾಜ್ಯದಾದ್ಯಂತ ಹೆಚ್ಚಿನ ಸಂಖ್ಯೆಯಲ್ಲಿ ಪ್ರಕರಣಗಳು ದಾಖಲಾಗುತ್ತಿರುವ ಹಿನ್ನೆಲೆಯಲ್ಲಿ, ಸರ್ಕಾರದ ಮಟ್ಟದಲ್ಲಿ ವಿಚಾರಣೆ ನಡೆಸಲು ಹೆಚ್ಚಿನ ಕಾರ್ಯದ ಒತ್ತಡ ಹಾಗೂ ಸಮಯಾವಕಾಶದ ಅಭಾವದಿಂದ ಪ್ರಕರಣಗಳನ್ನು ಇತ್ಯರ್ಥಪಡಿಸುವಲ್ಲಿ ವಿಳಂಬವಾಗುತ್ತಿರುತ್ತದೆ. ಜೊತೆಗೆ ಪ್ರಕರಣದಲ್ಲಿ ಭಾಗಿಯಾದ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳು ಹಾಗೂ ವಿಚಾರಣೆಗೆ ಅವಶ್ಯವಾಗಿ ಭಾಗವಹಿಸುವ ಅಧಿಕಾರಿಗಳು ರಾಜ್ಯದ ಎಲ್ಲಾ ಜಿಲ್ಲೆ, ತಾಲ್ಲೂಕು ಮತ್ತು ಗ್ರಾಮ ಪಂಚಾಯಿತಿಗಳಿಂದ ಬೆಂಗಳೂರಿನ ಸಚಿವಾಲಯ ಕಛೇರಿಗೆ ಹಾಜರಾಗಬೇಕಾಗುತ್ತಿದೆ.

ಈ ಹಿನ್ನೆಲೆಯಲ್ಲಿ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43–ಎ, ಪ್ರಕರಣ 48(4) ಮತ್ತು 48(5) ರಲ್ಲಿ ಇಂತಹ ಪ್ರಕರಣಗಳಲ್ಲಿ ಸರ್ಕಾರವು ಅವನಿಗೆ ಅಹವಾಲನ್ನು ಹೇಳಿಕೊಳ್ಳಲು ಅವಕಾಶ ನೀಡಿದ ನಂತರ ಮತ್ತು ಅಗತ್ಯವೆಂದು ತಾನು ಭಾವಿಸಿದಂಥ ವಿಚಾರಣೆ ಮಾಡಿದ ನಂತರ ತೆಗೆದು ಹಾಕುವುದು ಸೂಕ್ತವೆಂದು ಭಾವಿಸಿದ್ದರೆ, ಆ ಸದಸ್ಯನನ್ನು ಆತನ ಸದಸ್ಯತ್ವದಿಂದ ತೆಗೆದು ಹಾಕಬಹುದು ಎಂಬ ಉಪಬಂಧವಿರುವುದರಿಂದ ಅರೆನ್ಯಾಯಿಕ ಮಾದರಿಯಲ್ಲಿ ವಿಚಾರಣೆ ನಡೆಸುವ ಅಧಿಕಾರವನ್ನು ಸರ್ಕಾರವು ಸಂಬಂಧಿಸಿದ ಕಂದಾಯ ವಿಭಾಗಗಳ ಪ್ರಾದೇಶಿಕ ಆಯುಕ್ತರಿಗೆ ವಹಿಸುವುದು ಸೂಕ್ತವೆಂದು ನಿರ್ಧರಿಸಿದೆ. ಅಂತಹ ವಿಚಾರಣೆಯ ನಂತರ ವಿಚಾರಣೆ ವರದಿ ಆಧರಿಸಿ ಸಂಬಂಧಿಸಿದ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳ ವಿರುದ್ಧ ಸರ್ಕಾರದ ಹಂತದಲ್ಲಿ ಕ್ರಮ ತೆಗೆದುಕೊಳ್ಳಲಾಗುವುದು.

ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 1135 ಗ್ರಾಪಂಅ 2018,**
**ಬೆಂಗಳೂರು, ದಿನಾಂಕ:02-02-2019.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43–ಎ ರಡಿ ಗ್ರಾಮ ಪಂಚಾಯಿತಿ ಸದಸ್ಯರುಗಳು, ಪ್ರಕರಣ 48(4) ಮತ್ತು 48(5)ರಡಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಮತ್ತು ಉಪಾಧ್ಯಕ್ಷರುಗಳ ಮೇಲೆ ದಾಖಲಾಗುವ ದೂರುಗಳಿಗೆ ಸಂಬಂಧಿಸಿದ ಅರೆನ್ಯಾಯಿಕ ಮಾದರಿಯಲ್ಲಿ ವಿಚಾರಣೆ ನಡೆಸುವ ಅಧಿಕಾರವನ್ನು ಸಂಬಂಧಿಸಿದ ಕಂದಾಯ ವಿಭಾಗಗಳ ಪ್ರಾದೇಶಿಕ ಆಯುಕ್ತರುಗಳಿಗೆ ವಹಿಸಿ ಆದೇಶಿಸಿದೆ. ಪ್ರಾದೇಶಿಕ ಆಯುಕ್ತರ ವಿಚಾರಣೆ ವರದಿ ಆಧರಿಸಿ ಸಂಬಂಧಿಸಿದ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳ ವಿರುದ್ಧ ಸರ್ಕಾರದ ಹಂತದಲ್ಲಿ ಕ್ರಮ ತೆಗೆದುಕೊಳ್ಳಲಾಗುವುದು.

ಈ ಆದೇಶ ಅನುಷ್ಠಾನಕ್ಕೆ ಸಂಬಂಧಿಸಿದಂತೆ ವಿವರವಾದ ಮಾರ್ಗಸೂಚಿಯನ್ನು ಪ್ರತ್ಯೇಕವಾಗಿ ಅನುಬಂಧ–1 ರಲ್ಲಿ ನೀಡಿದೆ. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43–ಎ ಮತ್ತು 48(4) ಹಾಗೂ 48(5) ರಡಿ ಉಪಬಂಧಗಳನ್ನು ಅನುಬಂಧ–2 ರಲ್ಲಿ ನೀಡಿದೆ.

ಈ ಆದೇಶವನ್ನು ಕಾನೂನು ಇಲಾಖೆಯು ಟಿಪ್ಪಣಿ ಸಂಖ್ಯೆ: LAW 144(T) OPN 2018, dated: 31-12-2018 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

2/2/19

(ಎಂ.ಕೆ. ಕೆಂಪೇಗೌಡ)
ನಿರ್ದೇಶಕರು(ಪಂ.ರಾಜ್-1) ಹಾಗೂ ಪದನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1) ಪ್ರಾದೇಶಿಕ ಆಯುಕ್ತರು, ಬೆಂಗಳೂರು, ಮೈಸೂರು, ಬೆಳಗಾವಿ ಮತ್ತು ಕಲಬುರಗಿ ವಿಭಾಗಗಳು.
2) ಜಿಲ್ಲಾಧಿಕಾರಿಗಳು, ಎಲ್ಲಾ ಜಿಲ್ಲೆಗಳು.

3) ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು, ಎಲ್ಲಾ ಜಿಲ್ಲಾ ಪಂಚಾಯತಿಗಳು.
4) ಕಾರ್ಯನಿರ್ವಾಹಕಾಧಿಕಾರಿಗಳು, ಎಲ್ಲಾ ತಾಲ್ಲೂಕು ಪಂಚಾಯತಿಗಳು.
5) ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಎಲ್ಲಾ ಗ್ರಾಮ ಪಂಚಾಯತಿಗಳು.
6) ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು. (ರಾಜ್ಯ ಪತ್ರದಲ್ಲಿ ಪ್ರಕಟಿಸಲು)

ಪ್ರತಿ:

1) ಮಾನ್ಯ ಮುಖ್ಯಮಂತ್ರಿಗಳ ಅಪ್ತಕಾರ್ಯದರ್ಶಿಗಳು, ವಿಧಾನಸೌಧ.
2) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಆಪ್ತಕಾರ್ಯದರ್ಶಿಗಳು, ವಿಕಾಸಸೌಧ.
3) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತಕಾರ್ಯದರ್ಶಿಗಳು, ವಿಧಾನಸೌಧ.
4) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ ರವರ ಆಪ್ತಕಾರ್ಯದರ್ಶಿಗಳು.
5) ಸರ್ಕಾರದ ಕಾರ್ಯದರ್ಶಿ, (ಪಂಚಾಯತ್ ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ ರವರ ಆಪ್ತಕಾರ್ಯದರ್ಶಿಗಳು, ಬಹುಮಹಡಿ ಕಟ್ಟಡ.
6) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ ರವರ ಆಪ್ತಕಾರ್ಯದರ್ಶಿಗಳು, ಬಹುಮಹಡಿ ಕಟ್ಟಡ.
7) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಾನೂನು ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ.
8) ಎಲ್ಲಾ ಆಯುಕ್ತರು / ವ್ಯವಸ್ಥಾಪಕ ನಿರ್ದೇಶಕರುಗಳು / ನಿರ್ದೇಶಕರುಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ, ಬಹುಮಹಡಿ ಕಟ್ಟಡ.
9) ಉಪ ಕಾರ್ಯದರ್ಶಿಗಳು, (ಆಡಳಿತ-1) & (ಆಡಳಿತ-2), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
10) ಸಂಪಾದಕರು, ಕರ್ನಾಟಕ ವಿಕಾಸ/ ಇಲಾಖಾ ವೆಬ್‌ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ, ಬಹುಮಹಡಿ ಕಟ್ಟಡ.
11) ಹೆಚ್ಚುವರಿ ಪ್ರತಿ/ ಶಾಖಾ ರಕ್ಷಾ ಕಡತ

ಅನುಬಂಧ-1

(ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 1135 ಗ್ರಾಪಂಅ 2018, ದಿನಾಂಕ:02-02-2019)

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43-ಎ ರಡಿ ಗ್ರಾಮ ಪಂಚಾಯಿತಿ ಸದಸ್ಯರುಗಳು, ಪ್ರಕರಣ 48(4) ಮತ್ತು 48(5) ರಡಿ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರುಗಳ ಮೇಲೆ ದುರ್ವತನೆ, ಅಧಿಕಾರ ಹಾಗೂ ಹಣ ದುರುಪಯೋಗಪಡಿಸಿಕೊಂಡ ಆರೋಪಗಳಿಗೆ ಸಂಬಂಧಿಸಿದಂತೆ ಕ್ರಮಕೈಗೊಳ್ಳುವ ಸಲುವಾಗಿ ವಿಚಾರಣೆ ನಡೆಸುವ ಅಧಿಕಾರವನ್ನು ಪ್ರಾದೇಶಿಕ ಆಯುಕ್ತರುಗಳಿಗೆ ವಹಿಸುವ ಬಗ್ಗೆ ಹೊರಡಿಸಲಾದ ಆದೇಶದ ಅನುಷ್ಠಾನಕ್ಕೆ ಸಂಬಂಧಿಸಿದ ಮಾರ್ಗಸೂಚಿಗಳು.-

1) ಉಲ್ಲೇಖಿತ ಪ್ರಕರಣಗಳಡಿ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರುಗಳು ಮತ್ತು ಸದಸ್ಯರುಗಳು ಎಸಗುವ ಕರ್ತವ್ಯಲೋಪ, ದುರ್ವತನೆ, ಅಧಿಕಾರ ದುರುಪಯೋಗ ಹಾಗೂ ಹಣ ದುರುಪಯೋಗಪಡಿಸಿಕೊಂಡ ಆರೋಪಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕರು, ಜನಪ್ರತಿನಿಧಿಗಳಿಂದ ಬರುವ ದೂರುಗಳನ್ನು ಸಂಬಂಧಿಸಿದ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಕಳುಹಿಸಿ ಸತ್ಯಾಸತ್ಯತೆ ಬಗ್ಗೆ ಪರಿಶೀಲಿಸಿ ಈ ಪ್ರಕರಣಗಳಡಿ ವಿಚಾರಣೆ ಅರ್ಹವಿದ್ದಲ್ಲಿ ಶಿಫಾರಸ್ಸು ಮಾಡಲು ತಿಳಿಸುವುದು.
2) ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ದೂರುಗಳ ಬಗ್ಗೆ ಪರಿಶೀಲಿಸಿ ಅರ್ಹವಿದ್ದಲ್ಲಿ ದಾಖಲಾತಿಗಳ ಸಮೇತ ವಿಚಾರಣೆ ಕೈಗೊಳ್ಳಲು ಶಿಫಾರಸ್ಸು ಮಾಡುವರು.
3) ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಂದಲೇ ಶಿಫಾರಸ್ಸು ಬಂದಲ್ಲಿ ನೇರವಾಗಿ ವಿಚಾರಣೆಗೆ ಪರಿಗಣಿಸುವುದು.
4) ಹೀಗೆ ಶಿಫಾರಸ್ಸು ಬಂದ ನಂತರ ಸಂಬಂಧಿಸಿದ ಪ್ರಕರಣದಲ್ಲಿ ಭಾಗಿಗಳಾಗಿರುವ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳಿಗೆ ದೋಷಾರೋಪಣೆ ಹೊರಿಸಿ 15 ದಿವಸಗಳ ಕಾಲಾವಕಾಶ ನೀಡಿ ಕಾರಣ ಕೇಳಿ ನೋಟೀಸ್ ಜಾರಿ ಮಾಡುವುದು.
5) ನೋಟೀಸ್‌ಗಳಿಗೆ ವಿವರಣೆ ಸ್ವೀಕೃತವಾದ ನಂತರ ಪರಿಶೀಲಿಸಿ ದಿನಾಂಕ ನಿಗದಿಪಡಿಸಿ ಅರೆನ್ಯಾಯಿಕ ಮಾದರಿಯಲ್ಲಿ ವಿಚಾರಣೆ ನಡೆಸುವುದು.
6) ಈ ವಿಚಾರಣೆಯಲ್ಲಿ ಅವಶ್ಯವಿದ್ದಲ್ಲಿ ಸ್ಥಳೀಯ ಅಧಿಕಾರಿಗಳಿಂದ ಮಾಹಿತಿ/ವಿವರಣೆ ಪಡೆಯಬಹುದು. ವಿಚಾರಣೆ ವೇಳೆ ಸಂಬಂಧಿಸಿದ ದಾಖಲಾತಿಗಳೊಡನೆ ಹಾಜರಾಗಲು ಅಗತ್ಯಪಡಿಸಬಹುದು.
7) ಅವಶ್ಯವಿದ್ದಲ್ಲಿ ಪ್ರಕರಣದ ಗಂಭೀರತೆಗನುಗುಣವಾಗಿ 2-3 ದಿನಾಂಕಗಳಲ್ಲಿ ನಡೆಸಬಹುದು.
8) ಒಟ್ಟಾರೆ ಪ್ರಕರಣ ಸ್ವೀಕೃತವಾದ ಗರಿಷ್ಠ 3 ತಿಂಗಳ ಒಳಗಾಗಿ ವಿಚಾರಣೆ ಪೂರ್ಣಗೊಳಿಸುವುದು.
9) ವಿಚಾರಣೆ ಪೂರ್ಣಗೊಳಿಸಿ ಕೈಗೊಳ್ಳಬೇಕಾದ ಕ್ರಮದ ಬಗ್ಗೆ ನಿರ್ದಿಷ್ಟವಾದ ಶಿಫಾರಸ್ಸು ಮಾಡಿ ಆದೇಶ ಹೊರಡಿಸಲು ಸರ್ಕಾರಕ್ಕೆ ಕಳುಹಿಸುವುದು.
10) ಪ್ರಾದೇಶಿಕ ಆಯುಕ್ತರ ಶಿಫಾರಸ್ಸು ಆಧರಿಸಿ ಸಂಬಂಧಿಸಿದ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳ ಮೇಲೆ ಆದೇಶ ಹೊರಡಿಸಲು ಸರ್ಕಾರದ ಹಂತದಲ್ಲಿ ಕ್ರಮ ವಹಿಸಲಾಗುವುದು.

2/2/19

(ಎಂ.ಕೆ. ಕೆಂಪೇಗೌಡ)
ನಿರ್ದೇಶಕರು(ಪಂ.ರಾಜ್-1) ಹಾಗೂ ಪದನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

## ಅನುಬಂಧ-2

**(ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 1135 ಗ್ರಾಪಂಅ 2018, ದಿನಾಂಕ:02-02-2019)**

**ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43-ಎ ರಡಿ ಉಪಬಂಧಗಳು,-**

**43ಎ ಸದಸ್ಯರನ್ನು ತೆಗೆದುಹಾಕುವುದು,-** (1) ಸರ್ಕಾರವು ಗ್ರಾಮ ಪಂಚಾಯತ್‌ನ ಶಿಫಾರಸ್ಸಿನಂತೆ ಅಥವಾ ಅನ್ಯಥಾ ಯಾವೊಬ್ಬ ಸದಸ್ಯನನ್ನು,

(i) ಆತನು ತನ್ನ ಕರ್ತವ್ಯಗಳನ್ನು ನಿರ್ವಹಿಸುವಾಗ ದುರ್ನಡತೆಯ ಅಥವಾ ತಲೆ ತಗ್ಗಿಸುವಂಥ ನಡತೆಯ ತಪ್ಪಿತಸ್ಥನಾಗಿದ್ದಾನೆಂದು.

(ii) (ಎ) ಜಿಲ್ಲಾ ವೈದ್ಯಾಧಿಕಾರಿಯು ಪ್ರಮಾಣೀಕರಿಸಬಹುದಾದಂತೆ ಆ ಹುದ್ದೆಯನ್ನು ಹೊಂದಲು ವೈದ್ಯಕೀಯವಾಗಿ ಅಸಮರ್ಥನಾದ ಸಂದರ್ಭದಲ್ಲಿ.

(ಬಿ) ದಿವಾಳಿ ಅಥವಾ ಅಸ್ವಸ್ಥಚಿತ್ತದವನಾದ ಸಂದರ್ಭದಲ್ಲಿ.

ಸದಸ್ಯರಾಗಿ ತಮ್ಮ ಕರ್ತವ್ಯ ನಿರ್ವಹಿಸಲು ಅಸಮರ್ಥರಾಗಿರುವರೆಂದು ಅಥವಾ ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಅಸಡ್ಡೆ ಉಳ್ಳವರಾಗಿದ್ದಾರೆಂದು.

(iii) ಅವನು ಪಂಚಾಯತ್‌ನ ನಾಲ್ಕು ಒಂದಾದ ಮೇಲೊಂದರಂತೆ ಆದ ಸಭೆಗಳಿಗೆ ಹಾಜರಾಗಲು ತಪ್ಪಿದ್ದರೆ, ಮತ್ತು ಅಧ್ಯಕ್ಷನಾಗಲಿ ಅಥವಾ ಉಪಾಧ್ಯಕ್ಷನಾಗಲಿ ಸಭೆಯನ್ನು ಕರೆಯಬೇಕಾಗಿದ್ದಾಗ ಅಥವಾ ಅಗತ್ಯವಾಗಿದ್ದಾಗ ಒಂದಾದ ಮೇಲೊಂದರಂತೆ ನಡೆಯಬೇಕಾದ ಎರಡು ಸಭೆಗಳನ್ನು ಕರೆಯಲು ತಪ್ಪಿದ್ದಾನೆಂದು;

ಅಥವಾ

(iv) ಚುನಾವಣೆ ಸಂದರ್ಭದಲ್ಲಿ ಪರಿಗಣನೆಗಾಗಿ ಗ್ರಾಮ ಪಂಚಾಯತಿ ಅಥವಾ ತಾಲ್ಲೂಕು ಪಂಚಾಯತಿ ಅಥವಾ ಸಂದರ್ಭಾನುಸಾರವಾಗಿ ಜಿಲ್ಲಾ ಪಂಚಾಯತಿಯ ಸದಸ್ಯ ಅಥವಾ ಅಧ್ಯಕ್ಷ ಅಥವಾ ಉಪಾಧ್ಯಕ್ಷರ ಹುದ್ದೆಯ ವ್ಯಾಪಾರಕ್ಕೆ ಗ್ರಾಮ ಪಂಚಾಯತಿ ಅಥವಾ ತಾಲ್ಲೂಕು ಪಂಚಾಯತಿ ಅಥವಾ ಸಂದರ್ಭಾನುಸಾರವಾಗಿ ಜಿಲ್ಲಾ ಪಂಚಾಯತಿಯ ಯಾವುದೇ ಮತದಾರ ಅಥವಾ ಸದಸ್ಯನನ್ನು ಸೆಳೆಯುವುದು ಅಥವಾ ದಬ್ಬಾಳಿಕೆ ಅಥವಾ ವಂಚನೆ ಮಾಡಿದ್ದಾನೆಂದು.

(v) ಪಂಚಾಯತ್‌ನ ಯಾವುದೇ ಬೇರೆ ರೀತಿಯ ಕಾಮಗಾರಿಯನ್ನು ಕಾರ್ಯಗತಗೊಳಿಸುವಾಗ, ಕರಾರು ಸಂಬಂಧದ ಅಥವಾ ಕಾಮಗಾರಿಗೆ ಸಂಬಂಧಿಸಿದ ಯಾವುದೇ ವ್ಯವಹಾರದಲ್ಲಿ ಕುಟುಂಬದ ಹತ್ತಿರದ ಸಂಬಂಧಿಯಾಗಿರುವ ಯಾವೊಬ್ಬ ವ್ಯಕ್ತಿಯೊಂದಿಗೆ ಪ್ರತ್ಯಕ್ಷವಾಗಿ ತೊಡಗಿರುವುದು ಕಂಡುಬಂದರೆ ಅಥವಾ ಪಾಲುದಾರನಂತೆ, ನೌಕರನಂತೆ ಅಥವಾ ಅಂಥ ಅನ್ಯಥಾ ಸಂಘ ಸಂಸ್ಥೆ ಮಂಡಲಿಯಲ್ಲಿ ಸದಸ್ಯನಂತೆ ಸಹಭಾಗಿಯಾಗಿರುವನೆಂದು.

- ಕಂಡು ಬಂದರೆ, ಅವನಿಗೆ ಅಹವಾಲನ್ನು ಹೇಳಿಕೊಳ್ಳಲು ಅವಕಾಶ ನೀಡಿದ ನಂತರ ಮತ್ತು ಅಗತ್ಯವೆಂದು ತಾನು ಭಾವಿಸಿದಂಥ ವಿಚಾರಣೆ ಮಾಡಿದ ನಂತರ ತೆಗೆದು ಹಾಕುವುದು ಸೂಕ್ತವೆಂದು ಭಾವಿಸಿದ್ದರೆ ಆ ಸದಸ್ಯನನ್ನು ಆತನ ಸದಸ್ಯತ್ವದಿಂದ ತೆಗೆದುಹಾಕಬಹುದು.

**ವಿವರಣೆ: ಈ ಪ್ರಕರಣದ ಉದ್ದೇಶಕ್ಕಾಗಿ, ಕುಟುಂಬದ ಹತ್ತಿರದ ಬಂಧುಗಳು ಎಂದರೆ,-**

(ಎ) ಆಕೆಯ ಅಥವಾ ಆತನೊಂದಿಗೆ ವಾಸವಾಗಿರುವ ವ್ಯಕ್ತಿಯ ಪತ್ನಿ ಅಥವಾ ಪತಿ.

(ಬಿ) ಮಗ ಅಥವಾ ಮಗಳು ಅಥವಾ ಮಲಮಗ ಅಥವಾ ಮಲಮಗಳು.

(ಸಿ) ಅಂಥ ವ್ಯಕ್ತಿಯ ಮೇಲೆ ಸಂಪೂರ್ಣವಾಗಿ ಅವಲಂಬಿತನಾಗಿರುವ, ರಕ್ತಸಂಬಂಧವಾಗಿರಲಿ ಅಥವಾ ವಿವಾಹದಿಂದಾಗಲಿ, ಸಂಬಂಧಿಸಿದ ಯಾವೊಬ್ಬ ಇತರ ವ್ಯಕ್ತಿ.

(2) ಯಾವ ಅಧ್ಯಕ್ಷನನ್ನು ಅಥವಾ ಉಪಾಧ್ಯಕ್ಷನನ್ನು ಅಥವಾ ಸದಸ್ಯನನ್ನು ಹಾಗೆ ತೆಗೆದು ಹಾಕಲಾಗಿದೆಯೋ ಆ ಅಧ್ಯಕ್ಷನು ಅಥವಾ ಉಪಾಧ್ಯಕ್ಷನು ಅಥವಾ ಸದಸ್ಯನು. ಸದಸ್ಯನಾಗಿ ಅಂಥ ಸ್ಥಾನದ ಪ್ರಕಾರ್ಯಗಳನ್ನು ನಿರ್ವಹಿಸುವುದು ನಿಂತು ಹೋಗತಕ್ಕದ್ದು ಮತ್ತು ಅಧಿನಿಯಮದ 12ನೇ ಪ್ರಕರಣದಲ್ಲಿ

ಹೇಳಿರುವಂತೆ ಯಾವುದೇ ಪಂಚಾಯತ್‌ಗೆ ಮುಂದಿನ ಆರು ವರ್ಷಗಳವರೆಗೆ ಚುನಾವಣೆಗೆ ಸ್ಪರ್ಧಿಸಲು ಅನರ್ಹನಾಗತಕ್ಕದ್ದು.

**48 ಅಧ್ಯಕ್ಷನ ಮತ್ತು ಉಪಾಧ್ಯಕ್ಷನ ರಾಜೀನಾಮೆ ಅಥವಾ ತೆಗೆದುಹಾಕುವಿಕೆ,-** (1) ಗ್ರಾಮ ಪಂಚಾಯತಿಯ ಅಧ್ಯಕ್ಷನು, ತನ್ನ ಸಹಿ ಸಹಿತ ಅಸಿಸ್ಟೆಂಟ್ ಕಮೀಷನರ್ ಅವರಿಗೆ ಬರಹದಲ್ಲಿ ಬರೆದು ತನ್ನ ಹುದ್ದೆಗೆ ರಾಜೀನಾಮೆ ನೀಡಬಹುದು ಮತ್ತು ಗ್ರಾಮ ಪಂಚಾಯತಿಯ ಉಪಾಧ್ಯಕ್ಷನು ತನ್ನ ಸಹಿ ಸಹಿತ ಅಧ್ಯಕ್ಷರಿಗೆ ಬರಹದಲ್ಲಿ ಬರೆದು ಮತ್ತು ಅಧ್ಯಕ್ಷನು ಇಲ್ಲದಿದ್ದಾಗ ತನ್ನ ಸಹಿ ಸಹಿತ ಅಸಿಸ್ಟೆಂಟ್ ಕಮೀಷನರ್ ಅವರಿಗೆ ಬರಹದಲ್ಲಿ ಬರೆದು ತನ್ನ ಹುದ್ದೆಗೆ ರಾಜೀನಾಮೆ ನೀಡಬಹುದು.

**ಪರಂತು, ಗ್ರಾಮ ಪಂಚಾಯತಿಯ ಅಧ್ಯಕ್ಷ ಅಥವಾ ಉಪಾಧ್ಯಕ್ಷನು,-**

(i) ದೈಹಿಕ ಅಥವಾ ಮಾನಸಿಕ ಅಶಕ್ತತೆ ಉಳ್ಳವನೆಂದು, ರಾಜ್ಯ ಚುನಾವಣಾ ಆಯೋಗವು ಅನುಮೋದಿಸಿರುವ ಸಕ್ಷಮ ಪ್ರಾಧಿಕಾರವು ಪ್ರಮಾಣೀಕರಿಸಿರುವುದರ ರುಜುವಾತಿನ ಆಧಾರದ ಮೇಲೆ; ಅಥವಾ

(ii) ಕೇಂದ್ರ ಸರ್ಕಾರದಲ್ಲಿ ಅಥವಾ ರಾಜ್ಯ ಸರ್ಕಾರದಲ್ಲಿ ಅಥವಾ ಸಾರ್ವಜನಿಕ ಉದ್ಯಮಗಳಲ್ಲಿ ಉದ್ಯೋಗದಲ್ಲಿರುವುದರ ಆಧಾರದ ಮೇಲೆ.

- ತನ್ನ ಪದಕ್ಕೆ ಅಥವಾ ಸದಸ್ಯತ್ವಕ್ಕೆ ರಾಜೀನಾಮೆಯನ್ನು ನೀಡತಕ್ಕದ್ದು, ಅಥವಾ ಆತನನ್ನು ತೆಗೆದುಹಾಕಲು ಬದ್ಧನಾಗಿರತಕ್ಕದ್ದು.

- ಮತ್ತು ಪರಂತು, ಅಸಿಸ್ಟೆಂಟ್ ಕಮೀಷನ್‌ರವರು ರಾಜೀನಾಮೆಯ ಕಾರಣವನ್ನು ವಿಚಾರಣೆ ಮಾಡತಕ್ಕದ್ದು ಮತ್ತು ಬೆದರಿಕೆ, ಒತ್ತಾಯ, ಅನುಚಿತ ಪ್ರಭಾವ ಮತ್ತು ಪ್ರಲೋಭನೆಯಿಂದಾಗಿ ರಾಜೀನಾಮೆಯನ್ನು ಸಲ್ಲಿಸಿಲ್ಲವೆಂದು ಮತ್ತು ಸ್ವಇಚ್ಛೆಯಿಂದ ಸಲ್ಲಿಸಿದ್ದಾನೆಂದು ಮನಗಾಣತಕ್ಕದ್ದು.

ಮತ್ತು ಪರಂತು, ಡೆಪ್ಯೂಟಿ ಕಮೀಷನವರು ದೂರನ್ನು ಸ್ವೀಕರಿಸಿದ ತರುವಾಯ, ಬೆದರಿಕೆ, ಒತ್ತಾಯ ಅನುಚಿತ ಪ್ರಭಾವ ಮತ್ತು ಪ್ರಲೋಭನೆಯಿಂದಾಗಿ ರಾಜೀನಾಮೆಯನ್ನು ಸಲ್ಲಿಸಲಾಗಿದೆ ಮತ್ತು ಸ್ವಇಚ್ಛೆಯಿಂದ ಸಲ್ಲಿಸಲಾಗಿಲ್ಲವೆಂಬ ಬಗ್ಗೆ ವಿಚಾರಣೆ ಮಾಡತಕ್ಕದ್ದು ಮತ್ತು ಅಂಥ ರಾಜೀನಾಮೆಯನ್ನು ಸ್ವೀಕರಿಸತಕ್ಕದ್ದಲ್ಲ

(2) ಗ್ರಾಮ ಪಂಚಾಯತಿಯ ಪ್ರತಿಯೊಬ್ಬ ಅಧ್ಯಕ್ಷನು ಅಥವಾ ಉಪಾಧ್ಯಕ್ಷನು ಅವನು ಗ್ರಾಮ ಪಂಚಾಯತಿಯ ಸದಸ್ಯನಾಗಿರುವುದು ನಿಂತುಹೋದಾಗ ತನ್ನ ಹುದ್ದೆಯನ್ನು ತೆರವು ಮಾಡತಕ್ಕದ್ದು.

(3) (1)ನೇ ಉಪ ಪ್ರಕರಣದ ಅಡಿಯ ಪ್ರತಿಯೊಂದು ರಾಜೀನಾಮೆಯು ಸಂದರ್ಭಾನುಸಾರ ಅಸಿಸ್ಟೆಂಟ್ ಕಮೀಷನ್ ಅಥವಾ ಅಧ್ಯಕ್ಷನು ಅದನ್ನು ಸ್ವೀಕರಿಸಿದ ದಿನಾಂಕದಿಂದ ಹತ್ತು ದಿನಗಳು ಮುಗಿದ ನಂತರ, ಆ ಹತ್ತು ದಿನಗಳ ಅವಧಿಯೊಳಗೆ ಆತ ಆ ರಾಜೀನಾಮೆಯನ್ನು ಸಂದರ್ಭಾನುಸಾರ ಅಸಿಸ್ಟೆಂಟ್ ಕಮೀಷನ್‌ರವರಿಗೆ ಅಥವಾ ಅಧ್ಯಕ್ಷರಿಗೆ ಬರಹದಲ್ಲಿ ಬರೆದು ಹಿಂತೆಗೆದುಕೊಳ್ಳದಿದ್ದರೆ, ಜಾರಿಗೆ ಬರತಕ್ಕದ್ದು.

(4) ಗ್ರಾಮ ಪಂಚಾಯತಿಯ ಪ್ರತಿಯೊಬ್ಬ ಅಧ್ಯಕ್ಷನನ್ನು ಮತ್ತು ಉಪಾಧ್ಯಕ್ಷನನ್ನು, ಅಧ್ಯಕ್ಷನಾಗಿ ಅಥವಾ ಉಪಾಧ್ಯಕ್ಷನಾಗಿ ಅವನ ಕರ್ತವ್ಯಗಳ ನಿರ್ವಹಣೆಯಲ್ಲಿ ನಿರಂತರ ಅಲಕ್ಷ್ಯತೆ ತೋರುತ್ತಿರುವುದಕ್ಕಾಗಿ ಅಥವಾ ದುರ್ನಡತೆಯ ತಪ್ಪಿತಸ್ಥನಾಗಿರುವುದಕ್ಕಾಗಿ ಅಧ್ಯಕ್ಷ ಅಥವಾ ಉಪಾಧ್ಯಕ್ಷ ಹುದ್ದೆಯಿಂದ, ಅವನಿಗೆ ಅಹವಾಲು ಹೇಳಿಕೊಳ್ಳಲು ಒಂದು ಅವಕಾಶವನ್ನು ಕೊಟ್ಟ ತರುವಾಯ ಮತ್ತು ಅವಶ್ಯಕವಾದಲ್ಲಿ ತಾಲ್ಲೂಕು ಪಂಚಾಯತಿಯಿಂದ ವರದಿಯೊಂದನ್ನು ಪಡೆದುಕೊಂಡು ಅದನ್ನು ಪರಿಶೀಲಿಸಿದ ತರುವಾಯ ಸರ್ಕಾರವು ಆ ಹುದ್ದೆಯಿಂದ ತೆಗೆದು ಹಾಕಬಹುದಾಗಿರತಕ್ಕದ್ದು ಮತ್ತು ಹಾಗೆ ತೆಗೆದುಹಾಕಲಾದ ಅಧ್ಯಕ್ಷನು ಅಥವಾ ಉಪಾಧ್ಯಕ್ಷನು (2)ನೇ ಉಪಪ್ರಕರಣದ ಅಡಿಯಲ್ಲಿ ಸದಸ್ಯನಾಗಿರುವುದು ನಿಂತುಹೋಗಿರದಿದ್ದಲ್ಲಿ ಅವನು ಅಂಥ ಗ್ರಾಮ ಪಂಚಾಯತಿಯ ಸದಸ್ಯ ಹುದ್ದೆಯ ಉಳಿದ ಅವಧಿಯಲ್ಲಿ ಅಧ್ಯಕ್ಷನಾಗಿ ಅಥವಾ ಉಪಾಧ್ಯಕ್ಷನಾಗಿ ಮರು ಚುನಾವಣೆಗೆ ಅರ್ಹನಾಗಿರತಕ್ಕದ್ದಲ್ಲ.

(5) (4) ನೇ ಉಪ ಪ್ರಕರಣದ ಅಡಿಯಲ್ಲಿ ಹುದ್ದೆಯಿಂದ ತೆಗೆದುಹಾಕಲ್ಪಟ್ಟ ಅಧ್ಯಕ್ಷನನ್ನು ಅಥವಾ ಉಪಾಧ್ಯಕ್ಷನನ್ನು ಸರ್ಕಾರವು ಗ್ರಾಮ ಪಂಚಾಯತಿಯ ಸದಸ್ಯತ್ವದಿಂದ ಸಹ ತೆಗೆದುಹಾಕಬಹುದು.

2/2/19

(ಎಂ.ಕೆ. ಕೆಂಪೇಗೌಡ)
ನಿರ್ದೇಶಕರು(ಪಂ.ರಾಜ್-1) ಹಾಗೂ ಪದನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

2/2